# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 02/07/2022ರ
# ಸಭಾ ನಡವಳಿ

ಸಕಾಅ/ಕೆಂಉವಿ/ವಾರ್ಡ್ ಕಮಿಟಿ-ಸಭೆ -07/2022-23 ದಿನಾಂಕ: 02.07.2022

ದಿನಾಂಕ: 02/07/2022 ರಂದು ಬೆಳಿಗ್ಗೆ 11.00 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ಹಾಜರಿದ್ದವರು:

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಸಿ.ಎಂ. ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಅಧೀಕ್ಷಕ ಅಭಿಯಂತರರು ಬೃಹತ್ ನೀರುಗಾಲುವೆ ವಿಭಾಗ, ಕೇಂದ್ರ ಕಛೇರಿ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್-198, ಹೆಮ್ಮಿಗೆಪುರ |
| 3 | ಶ್ರೀ ಚಂದ್ರಶೇಖರ್ | ಸಹಾಯಕ ಅಭಿಯಂತರರು ಬೆಸ್ಕಾಂ, ಕೆಂಗೇರಿ |
| 4 | ಶ್ರೀ ರವಿಚಂದ್ರಚಾರಿ ಟಿ.ಕೆ | ಹಿರಿಯ ಆರೋಗ್ಯಪರಿವೀಕ್ಷಕರು ವಾರ್ಡ್ ನಂ.198, ಬಿಬಿಎಂಪಿ |
| 5 | ಶ್ರೀಮತಿ ಮೋನಿಕ | ಕಿರಿಯ ಆರೋಗ್ಯಪರಿವೀಕ್ಷಕರು ವಾರ್ಡ್ ನಂ.198, ಬಿಬಿಎಂಪಿ |
| 5 | ಶ್ರೀ ಸಿ.ವಿ. ಸೂರ್ಯನಾರಾಯಣ | ಜಲ ಪರಿವೀಕ್ಷರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 6 | ಶ್ರೀ ಕೃಷ್ಣಾನಾಯಕ್ | ಕೆಲಸ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |
| 7 | ಶ್ರೀ ಸಚಿನ್ ಮಾಲಗಿ | ಸಹಾಯಕ ಅಭಿಯಂತರರು ಬೀದಿ ದೀಪ ನಿರ್ವಹಣೆ, ರಾರಾನಗರ ವಲಯ, ಬಿಬಿಎಂಪಿ |



Scanned by CamScanner

| ಕ್ರ.ಸಂ | ಸಭೆಗೆ ಗೈರು ಹಾಜರಾದ ಅಧಿಕಾರಿಗಳು | ಇಲಾಖೆ |
|---|---|---|
| 1 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ರಸ್ತೆ ಮೂಲ ಭೂತ ಸೌಕರ್ಯವಿಭಾಗ, ಬಿ.ಬಿ.ಎಂ.ಪಿ, ರಾರಾನಗರ ವಲಯ |
| 2 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ, ರಾರಾನಗರ ವಲಯ |
| 3 | ಪಶುಪಾಲನಾ ಅಧಿಕಾರಿಗಳು | ಪಶುಪಾಲನಾ ಇಲಾಖೆ, ಬಿ.ಬಿ.ಎಂ.ಪಿ ರಾಜರಾಜೇಶ್ವರಿನಗರ ವಲಯ, |
| 4 | ವಲಯ ಅರಣ್ಯ ಅಧಿಕಾರಿಗಳು | ಅರಣ್ಯ ಇಲಾಖೆ, ಬಿ.ಬಿ.ಎಂ.ಪಿ, ರಾಜರಾಜೇಶ್ವರಿನಗರ ವಲಯ, |
| 5 | ತೋಟಗಾರಿಕಾ ಅಧಿಕ್ಷಕರು | ತೋಟಗಾರಿಕೆ ಇಲಾಖೆ, ಬಿಬಿಎಂಪಿ, ರಾಜರಾಜೇಶ್ವರಿನಗರ ವಲಯ, |
| 6 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೆಸ್ಕಾಂ ತಲಘಟ್ಟಪುರ |
| 7 | ಪೊಲೀಸ್ ಇಲಾಖೆ | ಕೆಂಗೇರಿ, ರಾಜರಾಜೇಶ್ವರಿನಗರ ಮತ್ತು ರಲಘಟ್ಟಪುರ ಪೊಲೀಸ್ ಠಾಣೆ |
| 8 | ಗುತ್ತಿಗೆದಾರರು | ಘನತ್ಯಾಜ್ಯ ನಿರ್ವಹಣೆ, ಹೆಮ್ಮಿಗೆಪುರ ವಾರ್ಡ್ ನಂ.198 |
| 9 | ಕಿರಿಯ ಆರೋಗ್ಯ ಪರಿವೀಕ್ಷಕರು | ಘನತ್ಯಾಜ್ಯ ನಿರ್ವಹಣೆ, ಹೆಮ್ಮಿಗೆಪುರ ವಾರ್ಡ್ ನಂ.198 |

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳನ್ನು ಹಾಗೂ ಸಭೆಯಲ್ಲಿ ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

❖ <u>ವಿದ್ಯುತ್ ಬೀದಿ ದೀಪಗಳ ನಿರ್ವಹಣೆ</u> :– ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಹೊಸ ವಿದ್ಯುತ್ ದೀಪಗಳ ಫಿಟ್ಟಿಂಗ್‌ಗಳನ್ನು ಅಳವಡಿಸಲಾಗಿದ್ದು ಹೊಸದಾಗಿ ಅಳವಡಿಸಿದ್ದ ವಿದ್ಯುತ್ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿರುವುದಿಲ್ಲದಿರುವ ಬಗ್ಗೆ ಸಭೆಯ ಗಮನಕ್ಕೆ



Scanned by CamScanner

ತರಲಾಯಿತು. ಸಭೆಯಲ್ಲಿ ಹಾಜರಿದ್ದ ವಿದ್ಯುತ್ ವಿಭಾಗದ ಅಭಿಯಂತರರು ಮಾತನಾಡಿ ಸಮಸ್ಯೆಯನ್ನು ಪರಿಹರಿಸಿಕೊಡಲಾಗುವುದೆಂದು ಸಭೆಗೆ ತಿಳಿಸಿದರು.

❖ **ಘನತ್ಯಾಜ್ಯ ನಿರ್ವಹಣೆ** :- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಕೃಷ್ಣಾ ಗಾರ್ಡನ್ ಇ-ಬ್ಲಾಕ್‌ನಲ್ಲಿ ಪೌರಕಾರ್ಮಿಕರು ರಸ್ತೆಯನ್ನು ಗುಡಿಸಲು ಬರುತ್ತಿರುವುದಿಲ್ಲವೆಂದು ಸಭೆಗೆ ತಿಳಿಸಿದರು. ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಪೌರಕಾರ್ಮಿಕರು ಮುಷ್ಕರದಲ್ಲಿ ತೊಡಗಿದ್ದು, ಯಾರೂ ಸಹ ಕೆಲಸಕ್ಕೆ ಹಾಜರಾಗದೇ ಇರುವುದರಿಂದ ಸ್ವಚ್ಚತಾ ಕಾರ್ಯದಲ್ಲಿ ವ್ಯತ್ಯಯವಾಗಿರುವುದಾಗಿ ಸಭೆಗೆ ತಿಳಿಸಿದರು.

ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಹಸಿಕಸ ಹೆಚ್ಚುವರಿಯಾಗಿ ಉತ್ಪತ್ತಿಯಾಗುತ್ತಿದ್ದು, ಹೆಚ್ಚುವರಿಯಾಗಿ ಒಂದು ಕಾಂಪ್ಯಾಕ್ಟರ್‌ನ್ನು ನಿಯೋಜಿಸಲು ಕಿರಿಯ ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ಕೋರಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಸಂಬಂಧಪಟ್ಟ ಅಧಿಕಾರಿಯವರೊಂದಿಗೆ ಮಾತನಾಡಿ ಸದರಿ ವಾರ್ಡ್‌ಗೆ ಹೆಚ್ಚುವರಿಯಾಗಿ ಒಂದು ಕಾಂಪ್ಯಾಕ್ಟರ್ ನಿಯೋಜಿಸಲು ಅನುಮೋದನೆ ನೀಡುವಂತೆ ಕೋರಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

❖ **ಬೆಂಗಳೂರು ವಿದ್ಯುತ್ ಸರಬರಾಜು ಕಂಪೆನಿ (ತಲಘಟ್ಟಪುರ)** :- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯಲ್ಲಿ ವಿದ್ಯುತ್ ವ್ಯತ್ಯಯ ಸಂಭವಿಸುತ್ತಿದ್ದು, ಟ್ರಾನ್ಸ್‌ಫಾರ್ಮರ್‌ಗಳು ಆಗಿಂದಾಗೆ ಕೆಟ್ಟುಹೋಗುತ್ತುದ್ದು ಮತ್ತು  ವಿದ್ಯುತ್ ತಂತಿಗಳ ಕೆಳಗೆ ಮರಗಳು ಬೆಳೆದು ವಿದ್ಯುತ್ ತಂತಿಗೆ ತಾಗುತ್ತಿದ್ದು, ಇದರ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲು ಸಭೆಗೆ ಕೋರಲಾಯಿತು. ಈ ಸಂಬಂಧ ಪರಿಶೀಲಿಸಲಾಗಿ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯ ಅಧಿಕಾರಿಗಳು ಸಭೆಗೆ ಸತತವಾಗಿ ಗೈರು ಹಾಜರಾಗುತ್ತಿರುವುದನ್ನು ಗಮನಿಸಲಾಯಿತು. ಬಡಾವಣೆ ನಿವಾಸಿಗಳಿಗೆ ನೇರವಾಗಿ ವಿದ್ಯುತ್ ಕಛೇರಿಗೆ ಲಿಖಿತ ದೂರನ್ನು ನೀಡಲು ಸೂಚಿಸಲಾಯಿತು.

❖ **ಬೆಂಗಳೂರು ವಿದ್ಯುತ್ ಸರಬರಾಜು ಕಂಪೆನಿ (ಕೆಂಗೇರಿ)** :- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಿ.ಹೆಚ್.ಇ.ಎಲ್. ಬಡಾವಣೆಯಲ್ಲಿ ವಿದ್ಯುತ್ ವ್ಯತ್ಯಯ ಸಂಭವಿಸುತ್ತಿದ್ದು, ಟ್ರಾನ್ಸ್‌ಫಾರ್ಮರ್‌ಗಳು ಆಗಿಂದಾಗೆ ಕೆಟ್ಟುಹೋಗುತ್ತುದ್ದು ಮತ್ತು  ವಿದ್ಯುತ್ ತಂತಿಗಳ ಕೆಳಗೆ ಮರಗಳು ಬೆಳೆದು ವಿದ್ಯುತ್ ತಂತಿಗೆ ತಾಗುತ್ತಿದ್ದು, ಇದರ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲು ಸಭೆಗೆ ಕೋರಲಾಯಿತು. ಈ ಸಂಬಂಧ ಪರಿಶೀಲಿಸಲಾಗಿ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯ ಅಧಿಕಾರಿಗಳು ಮಾತನಾಡಿ ಭೂಗತ ವಿದ್ಯುತ್ ಕೇಬಲ್‌ಗಳನ್ನು ಅಳವಡಿಸುವ ಕೆಲಸವು ಪ್ರಗತಿಯಲ್ಲಿದ್ದು, ಮುಂದಿನ ಎರಡು ಮೂರು ತಿಂಗಳಿನಲ್ಲಿ ಕೆಲಸವು ಪೂರ್ಣಗೊಳಿಸಿ ಸಮಸ್ಯೆಯನ್ನು ಪರಿಹರಿಸಲಾಗುವುದೆಂದು ಸಭೆಗೆ ತಿಳಿಸಿದರು.



Scanned by CamScanner

❖ **<u>ಬೆಂಗಳೂರು ಜಲ ಮಂಡಳಿ</u>** :- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಸಪ್ಪ ಬಡಾವಣೆಯಲ್ಲಿ 6 ಇಂಚು ವ್ಯಾಸದ ಒಳಚರಂಡಿ ಕೊಳವೆ ಸಾಲುಗಳನ್ನು ಅಳವಡಿಸಿದ್ದು, ಇದರಿಂದಾಗಿ ದಿನನಿತ್ಯ ಕೊಳವೆ ಸಾಲುಗಳು ಕಟ್ಟಿಕೊಂಡು ಕೊಳಚೆ ನೀರು ಸರಾಗವಾಗಿ ಹರಿಯದೇ ಸದರಿ ಪ್ರದೇಶದಲ್ಲಿ ವಾಸಿಸುವ ನಿವಾಸಿಗಳಿಗೆ ತೀವ್ರ ತೊಂದರೆಯಾಗುತ್ತಿರುವ ಬಗ್ಗೆ ಸಭೆಗೆ ತಿಳಿಸಲಾಯಿತು. ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಜಲ ಮಂಡಳಿಯ ಜಲಪರಿವೀಕ್ಷಕರು ಮಾತನಾಡಿ ಇದರ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

❖ **<u>ಬೃಹತ್ ನೀರುಗಾಲುವೆ ವಿಭಾಗ, ರಾರಾ ನಗರ ವಲಯ</u>** :- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯಲ್ಲಿ ಬೃಹತ್ ಮಳೆನೀರು ಚರಂಡಿ ನಿರ್ಮಾಣ ಹಂತದಲ್ಲಿದ್ದು, ಕೆಲಸದ ಪ್ರಗತಿಯು ಕುಂಠಿತವಾಗಿದ್ದು, ಶೀಘ್ರವಾಗಿ ಕೆಲಸ ನಿರ್ವಹಿಸಿ ಪೂರ್ಣಗೊಳಿಸಲು ಸಭೆಗೆ ಮತ್ತೊಮ್ಮೆ ಕೋರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ಕಾಮಗಾರಿಯನ್ನು ತ್ವರಿತವಾಗಿ ನಿರ್ವಹಿಸಿ ಪೂರ್ಣಗೊಳಿಸುವಂತೆ ಸಭೆಗೆ ತಿಳಿಸಿದರು.

❖ **<u>ಯೋಜನಾ ವಿಭಾಗ, ರಾರಾ ನಗರ ವಲಯ</u>**:- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಿಹೆಚ್ಇಎಲ್ ಬಡಾವಣೆಯ ಕಿತ್ತೂರು ರಾಣಿ ಚೆನ್ನಮ್ಮ ಉದ್ಯಾನವನದಲ್ಲಿ ಇರುವ ಮಕ್ಕಳ ಆಟಿಕೆಯ ವಸ್ತುಗಳು ಸಂಪೂರ್ಣ ಹಾಳಾಗಿದ್ದು, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಭೆಯ ಗಮನಕ್ಕೆ ಮತ್ತೊಮ್ಮೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ವಲಯದ ಯೋಜನಾ ವಿಭಾಗದ ವತಿಯಿಂದ ದುರಸ್ಥಿಪಡಿಸಲು ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

❖ **<u>ವಾರ್ಡ್‌ನ ಕಾಮಗಾರಿಗಳು</u>** :- 1) ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಸಪ್ಪ ಬಡಾವಣೆಯಲ್ಲಿ ಭಾಗಶಃ ರಸ್ತೆ ಗುಂಡಿಗಳನ್ನು ಮುಚ್ಚಿದ್ದು, ಉಳಿಕೆ ಗುಂಡಿಗಳನ್ನು ಶೀಘ್ರವಾಗಿ ಮುಚ್ಚಲು ಸಭೆಯ ಗಮನಕ್ಕೆ ಕೋರಲಾಯಿತು. ಈ ಸಂಬಂಧ ಸಭೆಯಲ್ಲಿಹಾಜರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಮುಂದಿನ ವಾರದಲ್ಲಿ ರಸ್ತೆಯ ಎಲ್ಲಾ ಗುಂಡಿಗಳನ್ನು ಮುಚ್ಚಿಸಲಾಗುವುದೆಂದು ಸಭೆಗೆ ತಿಳಿಸಿದರು.

2) ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಸಪ್ಪ ಬಡಾವಣೆಯಲ್ಲಿನ 4ನೇ ಅಡ್ಡ ರಸ್ತೆಯಲ್ಲಿ ಕಾಂಕ್ರೀಟ್ ಚರಂಡಿ ನಿರ್ಮಾಣ ಮಾಡಲು ಸಭೆಗೆ ಕೋರಲಾಯಿತು. ಈ ಸಂಬಂಧ ಸಭೆಯಲ್ಲಿಹಾಜರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ಚರಂಡಿ ನಿರ್ಮಾಣ ಮಾಡಲು ಅಮೃತ ನಗರೋತ್ಥಾನ ಅನುದಾನದಡಿ ನಿರ್ಮಾಣ ಮಾಡಲಾಗುವುದೆಂದು ಸಭೆಗೆ ತಿಳಿಸಿದರು.



Scanned by CamScanner

3) ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಹಲವಾರು ರಸ್ತೆಗಳಲ್ಲಿ ಬ್ಯಾನರ್‌ಗಳನ್ನು ಅಳವಡಿಸುತ್ತಿದ್ದು, ತೆರವುಗೊಳಿಸಬೇಕಾಗಿ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಸಭೆಯಲ್ಲಿಹಾಜರಿದ್ದ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ಬ್ಯಾನರ್‌ಗಳನ್ನು ತೆರವುಗೊಳಿಸಲಾಗುವುದೆಂದು ಸಭೆಗೆ ತಿಳಿಸಿದರು.

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್-198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್-198, ಹೆಮ್ಮಿಗೆಪುರ

ಪ್ರತಿಯನ್ನು:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಾರ್ಯಪಾಲಕ ಅಭಿಯಂತರರು (ವಿದ್ಯುತ್ ವಿಭಾಗ) ರಾರಾನಗರ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8) ಕಾರ್ಯಪಾಲಕ ಅಭಿಯಂತರರು (ಯೋಜನಾ ವಿಭಾಗ), ರಾರಾನಗರ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
9) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
10) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
12) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ (110 ಹಳ್ಳಿ ಯೋಜನಾ ಉಪವಿಭಾಗ) ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.



Scanned by CamScanner

13) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ-ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
15) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ-ತಲಘಟ್ಟಪುರ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
16) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
17) ಪಶು ಸಂಗೋಪನ ಅಧಿಕಾರಿಗಳು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
18) ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ರಾರಾನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
19) ಪೊಲೀಸ್ ಸಬ್ಇನ್ಸ್‌ಪೆಕ್ಟರ್, ಕೆಂಗೇರಿ ಸಂಚಾರಿ ಪೊಲೀಸ್‌ಠಾಣೆ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
20) ಪೊಲೀಸ್ ಸಬ್ಇನ್ಸ್‌ಪೆಕ್ಟರ್, ತಲಘಟ್ಟಪುರ ಪೊಲೀಸ್‌ಠಾಣೆ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
21) ಪೊಲೀಸ್ ಸಬ್ಇನ್ಸ್‌ಪೆಕ್ಟರ್, ರಾಜರಾಜೇಶ್ವರಿನಗರ ಪೊಲೀಸ್‌ಠಾಣೆ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
22) ಪೊಲೀಸ್ ಸಬ್ಇನ್ಸ್‌ಪೆಕ್ಟರ್, ಕೆಂಗೇರಿ ಪೊಲೀಸ್‌ಠಾಣೆ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.



Scanned by CamScanner